**ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 19-07-2025 ರಂದು ಪ್ರಮಾಣ ಮಾಡಿಸಲಾಯಿತು**

ಮದ್ಯಂತರ ಅರ್ಜಿ ಆದೇಶದ ಮೇರೆಗೆ ಸಾಕ್ಷಿಯ ಪಾಟೀ ಸವಾಲಿಗೆ ಅವಕಾಶ ನೀಡಲಾಯಿತು.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಆರ್ ಸಿ ಎಚ್ ವಕೀಲರಿಂದಃ**

ಮೇ 2017 ರಲ್ಲಿ ನಾನು ಸಾಕ್ಷಿ ಎಂದು ಸಹಿ ಮಾಡಿರುತ್ತೇನೆ. ಬ್ಯಾಂಕಿನಿಂದ ಸಾಲ ನೀಡಿದ ಬಗ್ಗೆ ನನಗೆ ಯಾವುದೆ ಮಾಹಿತಿ ಇಲ್ಲ. ಚಾಸಾ-1 ರವರು ಹೇಳಿದ್ದರಿಂದ ನಾನು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲೀಸರು ಬ್ಯಾಂಕಿಗೆ ಬಂದು ಮಹಜರ ಮಾಡಿರುತ್ತಾರೆ. ಮಹಜರ ಸಮಯದಲ್ಲಿ ಪೋಟೋ ತೆಗೆದಿರುತ್ತಾರೆ ಆದರೆ ನನಗೆ ಕೊಟ್ಟಿಲ್ಲ. ಪೋಲೀಸರು ಬ್ಯಾಂಕಿಗೆ ಬಂದು ಪಂಚನಾಮೆ ಜರುಗಿಸಿ ಪೋಟೋ ತೆಗೆದಿದ್ದಾರೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮಹಜರ ಸಲುವಾಗಿ ನನಗೆ ನೋಟೀಸ ಕೊಟ್ಟಿಲ್ಲ. ಪಂಚನಾಮೆಯನ್ನು ಬ್ಯಾಂಕಿನಲ್ಲಿ ಮೋಸ ಆಗಿದೆ ಎಂದು ಜರುಗಿಸಿರುತ್ತಾರೆ. ಯಾವ ದಾಖಲೆಯೆಂದು ನನಗೆ ಗೊತ್ತಿಲ್ಲ. ಪಂಚನಾಮೆಯಲ್ಲಿ ಬರೆದ ವಿಷಯ ಈಗ ನನಗೆ ನೆನಪಿಲ್ಲ. ಪಂಚನಾಮೆಯನ್ನು ಸ್ಥಳದಲ್ಲಿ ಬರೆದಿರುತ್ತಾರೆ. ನಮ್ಮ ಬ್ಯಾಂಕಿನಲ್ಲಿ ಸಿ ಸಿ ಟಿ ಅಳವಡಿಸಲಾಗಿದೆ. ನನಗೆ ಪಂಚನಾಮೆ ಬಗ್ಗೆ ಗೊತ್ತಿಲ್ಲದಿದ್ದರೂ ಕೂಡಾ ಚಾಸಾ-1 ರವರ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿಯ ಆರೋಪಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಆರೋಪಿತರಿಗೆ ತೊಂದರೆ

ಕೊಡುವ ಸಲುವಾಗಿ ಚಾಸಾ-1 ರವರ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯಲ್ಲಿ ಬರೆದ ವಿಷಯ ಗೊತ್ತಿಲ್ಲದಿದ್ದರೂ ಕೂಡಾ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೆ ಸರಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು,**
**ಕಲಘಟಗಿ.**